ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಸಂ: **DTE-ADMI0SCH1/12/2025**

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು - 560 001.
ದಿನಾಂಕ:04-08-2025

**-:: ಸುತ್ತೋಲೆ ::-**

**ವಿಷಯ :** ಸಮಾಜ ಕಲ್ಯಾಣ ಇಲಾಖೆಯಿಂದ ಅನುಷ್ಠಾನ ಮಾಡಲಾಗುತ್ತಿರುವ ಕೇಂದ್ರ ಪುರಸ್ಕೃತ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮ ಸಂಬಂಧ ಎಲ್ಲಾ ಕಾಲೇಜುಗಳ Empowerment officer ಮತ್ತು ಅರ್ಹ ವಿದ್ಯಾರ್ಥಿಗಳನ್ನು Biometric Authentication ಪ್ರಕ್ರಿಯೆಗೆ ಒಳಪಡಿಸುವ ಬಗ್ಗೆ.

**ಉಲ್ಲೇಖ :** ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು, ಇವರ ಅರೇ ಸರ್ಕಾರಿ ಪತ್ರ ಸಂಖ್ಯೆ: SWD-SCHCOSC/62/2025 - 1736489, ದಿನಾಂಕ: 17-07-2025

********

ಸಮಾಜ ಕಲ್ಯಾಣ ಇಲಾಖೆಯಿಂದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ, ವಿದ್ಯಾರ್ಥಿಗಳಿಗೆ ಕೇಂದ್ರ ಪುರಸ್ಕೃತ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನವನ್ನು ಮಂಜೂರು ಮಾಡಲಾಗುತ್ತಿದೆ. ಈ ಯೋಜನೆಯಡಿ ಬರುವ ಕುಟುಂಬದ ವಾರ್ಷಿಕ ಅದಾಯ ರೂ.2.50 ಲಕ್ಷದ ಮಿತಿಯ ಒಳಗಿರುವ ಹಾಗೂ ಮೆಟ್ರಿಕ್ ನಂತರ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ಒಮ್ಮೆ ಮಾತ್ರ State Scholarship Portal ನಲ್ಲಿ ನೊಂದಾವಣೆ ಆಗಿ ಅರ್ಜಿ ಸಲ್ಲಿಸಿದರೆ, ಪ್ರತಿ ವರ್ಷ ಸದರಿ ಅರ್ಜಿಯು UUCMS/UNIDATA ದತ್ತಾಂಶದಂತೆ ನವೀಕರಣಗೊಂಡು ವಿದ್ಯಾರ್ಥಿಯು ತನ್ನ ಕೋರ್ಸ್ ಅನ್ನು ಯಾವುದೇ Year Back ಇಲ್ಲದೇ ಪೂರ್ಣಗೊಳಿಸುವವರೆಗೆ ಮಂಜೂರಾಗುತ್ತದೆ.

ಮುಂದುವರೆದು, ಸದರಿ ಕಾರ್ಯಕ್ರಮವು ಕೇಂದ್ರ ಪುರಸ್ಕೃತ ಕಾರ್ಯಕ್ರಮವಾಗಿ ಒಟ್ಟಾರೆ ಮಂಜೂರಾದ ವಿದ್ಯಾರ್ಥಿವೇತನದ ಪೈಕಿ ಶೇ. **60** ನ್ನು ಕೇಂದ್ರ ಸರ್ಕಾರವೇ ನೇರವಾಗಿ ವಿದ್ಯಾರ್ಥಿಯ ಆಧಾರ್ ಜೋಡಣೆ ಹೊಂದಿರುವ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗುತ್ತಿದೆ. ಸದರಿ ಕೇಂದ್ರದ ಪಾಲಿನ ಶೇ.**60**ನ್ನು ಪಡೆಯಲು ಅರ್ಹ ಪರಿಶಿಷ್ಟ ಜಾತಿ ವಿದ್ಯಾರ್ಥಿಯು ಕಡ್ಡಾಯವಾಗಿ **Biometric Authentication** ಪ್ರಕ್ರಿಯೆಗೆ ಒಳಪಡಬೇಕಿರುತ್ತದೆ **ಹಾಗೂ** ಕಾಲೇಜುಗಳ ನೋಡಲ್ ಅಧಿಕಾರಿಗಳಾದ **Empowerment officer** ಗಳಿಗೂ ಸಹ **Biometric Authentication** ಕಡ್ಡಾಯವಾಗಿರುತ್ತದೆ.

ಅದರಂತೆ ಉಲ್ಲೇಖಿತ ಪತ್ರಗಳಲ್ಲಿ ಸದರಿ ***Biometric Authentication*** ಸಂಬಂಧ ಎಲ್ಲಾ ಗ್ರಾಮ ಒನ್, ಕರ್ನಾಟಕ ಒನ್, ಬೆಂಗಳೂರು ಒನ್ ಸೇವಾ ಕೇಂದ್ರಗಳಲ್ಲಿ ಸದರಿ ಪ್ರಕ್ರಿಯೆಗೆ ಉಚಿತವಾಗಿ ಒಳಸಿಕೊಳ್ಳಲು ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಅವಕಾಶ ಕಲ್ಪಿಸಲಾಗಿರುತ್ತದೆ. ಅಲ್ಲದೆ ಸಮಾಜ ಕಲ್ಯಾಣ ಇಲಾಖೆಯ ತಾಲ್ಲೂಕು ಕಛೇರಿಗಳಲ್ಲಿಯೂ ಸಹ ಉಚಿತವಾಗಿ ಸದರಿ ಪ್ರಕ್ರಿಯೆಗೆ ಸಂಪರ್ಕಿಸಬಹುದಾಗಿದೆ, ಆದುದರಿಂದ ತಾಂತ್ರಿಕ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಖಾಸಗಿ ಇಂಜಿನಿಯರಿಂಗ್ ಹಾಗೂ ಪಾಲಿಟೆಕ್ನಿಕ್‌ಗಳ Empowerment officer ಮತ್ತು ಅರ್ಹ ವಿದ್ಯಾರ್ಥಿಗಳು ಈ ಕೂಡಲೇ Biometric Authentication ಪ್ರಕ್ರಿಯೆಯನ್ನು ಮಾಡಿಸಬೇಕೆಂದು ಸೂಚಿಸಿದೆ. ಒಂದು ವೇಳೆ ವಿದ್ಯಾರ್ಥಿಗಳು ವಿದ್ಯಾರ್ಥಿವೇತನ ಪಡೆಯಲು ವಂಚಿತರಾದಲ್ಲಿ ಆಯಾ ಸಂಸ್ಥೆಯ ಪ್ರಾಂಶುಪಾಲರು ನೇರ ಹೊಣೆಗಾರರಾಗುತ್ತಾರೆ ಎಂದು ಈ ಮೂಲಕ ತಿಳಿಸಲಾಗಿದೆ.

*"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"*

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

ಇವರಿಗೆ :-

1. ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಖಾಸಗಿ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ - ಮುಂದಿನ ಅಗತ್ಯ ಕ್ರಮಕ್ಕಾಗಿ.
2. **ಸಂಯೋಜನಾಧಿಕಾರಿಯವರು**, ಇ-ಆಡಳಿತ, ತಾ.ಶಿ.ಇ, ಬೆಂಗಳೂರು. (ಇಲಾಖೆ ವೆಬ್‌ಸೈಟ್‌ನಲ್ಲಿ ಪ್ರಚುರ ಪಡಿಸಲು).